# All India Radio: Bangalore
# National Bulletin In Kannada
# 02.10.2026  07.35 a.m.
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

****************

ಮುಖ್ಯಾಂಶಗಳು

1. ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 157ನೇ ಜಯಂತಿ: ಗಣ್ಯರಿಂದ ಗೌರವ ನಮನ; ರಾಜ್‌ಘಾಟ್‌ನಲ್ಲಿ ಸರ್ವ ಧರ್ಮ ಪ್ರಾರ್ಥನಾ ಸಭಾ ಆಯೋಜನೆ
2. ಜಾಗತಿಕ ಸಂಘರ್ಷಗಳ ಸಂದರ್ಭದಲ್ಲಿ ಮಹಾತ್ಮ ಗಾಂಧೀಜಿ ಅವರ ಸಂದೇಶಗಳು ಮತ್ತಷ್ಟು ಪ್ರಸ್ತುತ – ರಾಷ್ಟ್ರಪತಿ ದ್ರೌಪದಿ ಮುರ್ಮು ಅಭಿಮತ
3. ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ 122ನೇ ಜಯಂತಿ: ದೇಶಾದ್ಯಂತ ಗೌರವ ನಮನ
4. ಕ್ಯಾಪ್ಟನ್ ಸ್ಮಿತ್ ಮಚ್ಚಾರ್ ಆರೋಗ್ಯ ಸ್ಥಿತಿ ನಿರಂತರ ಪರಿಶೀಲನೆ: ಕೇಂದ್ರ ವಿದೇಶಾಂಗ ಸಚಿವಾಲಯ
5. ಏಷ್ಯನ್‌ಗೇಮ್ಸ್‌ನಲ್ಲಿ ಪದಕ ಬೇಟೆ ಮುಂದುವರಿಸಿದ ಭಾರತ; ಹಲವು ಸ್ಪರ್ಧೆಗಳಲ್ಲಿ ಪದಕ ಖಚಿತ

****************

ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 157ನೇ ಜಯಂತಿಯ ಅಂಗವಾಗಿ ಇಂದು ದೇಶಾದ್ಯಂತ ಹಾಗೂ ವಿದೇಶಗಳಲ್ಲಿರುವ ಭಾರತೀಯ ರಾಯಭಾರ ಕಚೇರಿಗಳಲ್ಲಿ ವಿವಿಧ ಗೌರವ ಸಮಾರಂಭಗಳನ್ನು ಆಯೋಜಿಸಲಾಗಿದೆ.

ಗಾಂಧೀಜಿಯವರ ತತ್ತ್ವ ಮತ್ತು ಆದರ್ಶಗಳನ್ನು ಸ್ಮರಿಸುವ ಈ ಜಯಂತಿಯ ಪ್ರಯುಕ್ತ ದೇಶದಾದ್ಯಂತ ಅಪಾರ ಸಂಖ್ಯೆಯ ಜನರು ಗಾಂಧೀಜಿಯವರಿಗೆ ಶ್ರದ್ಧಾಂಜಲಿ ಸಲ್ಲಿಸುತ್ತಿದ್ದಾರೆ.

ರಾಷ್ಟ್ರ ರಾಜಧಾನಿ ದೆಹಲಿಯಲ್ಲಿರುವ ಗಾಂಧೀಜಿಯವರ ಸಮಾಧಿ ಸ್ಥಳವಾದ ರಾಜ್‌ಘಾಟ್‌ನಲ್ಲಿ 'ಸರ್ವ ಧರ್ಮ ಪ್ರಾರ್ಥನಾ ಸಭಾ'ವನ್ನು ಆಯೋಜಿಸಲಾಗಿದ್ದು, ಗಾಂಧೀಜಿಯವರ ಸತ್ಯ, ಅಹಿಂಸೆ ಹಾಗೂ ಶಾಂತಿಯ ಸಂದೇಶಗಳನ್ನು ಸಾರುವ ಕಾರ್ಯಕ್ರಮಗಳು ಜರುಗುತ್ತಿವೆ.

****************

ಜಾಗತಿಕವಾಗಿ ವಿವಿಧ ಭಾಗಗಳಲ್ಲಿ ಯುದ್ಧ ಮತ್ತು ಸಂಘರ್ಷದ ವಾತಾವರಣ ನೆಲೆಸಿರುವ ಪ್ರಸ್ತುತ ದಿನಗಳಲ್ಲಿ ಮಹಾತ್ಮ ಗಾಂಧೀಜಿಯವರ ಶಾಂತಿ ಮತ್ತು ಅಹಿಂಸೆಯ ಸಂದೇಶಗಳು ಮತ್ತಷ್ಟು ಪ್ರಸ್ತುತತೆಯನ್ನು ಪಡೆದುಕೊಂಡಿವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

ಗಾಂಧಿ ಜಯಂತಿಯ ಶುಭ ಸಂದರ್ಭದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿ ಸಂದೇಶ ನೀಡಿರುವ ರಾಷ್ಟ್ರಪತಿ, ಮಹಾತ್ಮ ಗಾಂಧೀಜಿಯವರ ಜೀವನ ಮತ್ತು ತತ್ತ್ವಗಳನ್ನು ಜಾಗತಿಕ ಸಮುದಾಯವು ಅತ್ಯಂತ ಗೌರವದಿಂದ ಕಾಣುತ್ತದೆ ಎಂದಿದ್ದಾರೆ.

2047ರ ವೇಳೆಗೆ ಭಾರತವನ್ನು 'ವಿಕಸಿತ ಭಾರತ'ವನ್ನಾಗಿ ನಿರ್ಮಿಸುವ ರಾಷ್ಟ್ರೀಯ ಗುರಿಯತ್ತ ದೇಶವು ವೇಗವಾಗಿ ಮುನ್ನಡೆಯುತ್ತಿದ್ದು, ಅಭಿವೃದ್ಧಿಯ ಫಲಗಳು ಪ್ರತಿಯೊಬ್ಬ ನಾಗರಿಕನಿಗೂ ತಲುಪುವಂತೆ ಮಾಡಲು ಸಹಾನುಭೂತಿ ಹಾಗೂ ಒಳಗೊಳ್ಳುವಿಕೆಯ ಮೌಲ್ಯಗಳಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ಅವರು ತಿಳಿಸಿದರು.

ಈ ಚಿಂತನೆಯು ಸರ್ವರ ಕಲ್ಯಾಣ ಮತ್ತು ಅಭ್ಯುದಯದ ತತ್ತ್ವವನ್ನು ಆಧರಿಸಿದ ಗಾಂಧೀಜಿಯವರ 'ಸರ್ವೋದಯ' ಕಲ್ಪನೆಯನ್ನು ಪ್ರತಿಬಿಂಬಿಸುತ್ತದೆ ಎಂದ ಅವರು, ನೈತಿಕ ನಡವಳಿಕೆ ಹಾಗೂ ಸಕ್ರಿಯ ಪಾಲ್ಗೊಳ್ಳುವಿಕೆಯ ಮೂಲಕ ಸಮರ್ಥ, ಅಭಿವೃದ್ಧಿ ಹೊಂದಿದ ಮತ್ತು ಆತ್ಮನಿರ್ಭರ ಭಾರತ ನಿರ್ಮಾಣಕ್ಕೆ ನಾಗರಿಕರು ತಮ್ಮ ಬದ್ಧತೆಯನ್ನು ಪುನರುಚ್ಚರಿಸಬೇಕೆಂದು ಕರೆ ನೀಡಿದರು.

****************

ದೇಶದ ಮಾಜಿ ಪ್ರಧಾನಮಂತ್ರಿ, 'ಜೈ ಜವಾನ್, ಜೈ ಕಿಸಾನ್' ಘೋಷಣೆಯ ಹರಿಕಾರ ಲಾಲ್ ಬಹದ್ದೂರ್ ಶಾಸ್ತ್ರಿ ಅವರ 122ನೇ ಜಯಂತಿಯ ಅಂಗವಾಗಿ ಇಂದು ಇಡೀ ದೇಶ ಅವರಿಗೆ ಗೌರವ ನಮನಗಳನ್ನು ಸಲ್ಲಿಸುತ್ತಿದೆ.

1904ರ ಅಕ್ಟೋಬರ್ 2ರಂದು ಉತ್ತರ ಪ್ರದೇಶದ ಪಂಡಿತ್ ದೀನ್ ದಯಾಳ್ ಉಪಾಧ್ಯಾಯ ನಗರ, ಅಂದಿನ ಮೊಘಲ್ ಸರಾಯ್‌ನಲ್ಲಿ ಜನಿಸಿದ ಶಾಸ್ತ್ರಿಯವರು, ಕಿರಿಯ ವಯಸ್ಸಿನಲ್ಲೇ ಭಾರತದ ಸ್ವಾತಂತ್ರ್ಯ ಸಂಗ್ರಾಮಕ್ಕೆ ಧುಮುಕಿ 1921ರ ಅಸಹಕಾರ ಚಳವಳಿಯಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು.

ಸ್ವಾತಂತ್ರ್ಯಾನಂತರ ಉತ್ತರ ಪ್ರದೇಶ ಸರ್ಕಾರದಲ್ಲಿ ಹಾಗೂ ನಂತರ ಕೇಂದ್ರ ಸರ್ಕಾರದಲ್ಲಿ ವಿವಿಧ ಮಹತ್ವದ ಸಚಿವ ಸಂಪುಟ ಖಾತೆಗಳನ್ನು ನಿರ್ವಹಿಸಿದ ಅವರು, ತಮ್ಮ ಪ್ರಾಮಾಣಿಕತೆ, ಸರಳತೆ ಹಾಗೂ ದೃಢ ನಾಯಕತ್ವ ಗುಣಗಳಿಂದ ನಾಡಿನ ಗಮನ ಸೆಳೆದಿದ್ದರು.

ಪ್ರಧಾನಿಯಾಗಿ ದೇಶವನ್ನು ಸಮರ್ಥವಾಗಿ ಮುನ್ನಡೆಸಿದ್ದ ಶಾಸ್ತ್ರಿಯವರ ತ್ಯಾಗ ಹಾಗೂ ಸೇವಾ ಮನೋಭಾವವನ್ನು ಸ್ಮರಿಸಿ ನಾಡಿನಾದ್ಯಂತ ವಿವಿಧ ಕಾರ್ಯಕ್ರಮಗಳ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಗುತ್ತಿದೆ.

****************

ಗಾಂಧಿ ಜಯಂತಿ ಹಾಗೂ ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿಯ ಹಿನ್ನೆಲೆಯಲ್ಲಿ ರಾಷ್ಟ್ರ ರಾಜಧಾನಿಯ ರಾಜ್‌ಘಾಟ್ ಮತ್ತು ವಿಜಯ್ ಘಾಟ್‌ಗಳಲ್ಲಿ ವಿವಿಧ ಕಾರ್ಯಕ್ರಮಗಳು ಆಯೋಜನೆಗೊಂಡಿದ್ದು, ಸಾರ್ವಜನಿಕರ ಅನುಕೂಲಕ್ಕಾಗಿ ದೆಹಲಿ ಸಂಚಾರ ಪೊಲೀಸರು ವಿಶೇಷ ಸಂಚಾರ ಮಾರ್ಗಸೂಚಿಯನ್ನು ಬಿಡುಗಡೆ ಮಾಡಿದ್ದಾರೆ.

ಪ್ರಮುಖ ಕಾರ್ಯಕ್ರಮಗಳು ನಡೆಯುವ ರಾಜ್‌ಘಾಟ್, ರಿಂಗ್ ರೋಡ್ ಹಾಗೂ ಸುತ್ತಮುತ್ತಲಿನ ರಸ್ತೆಗಳಲ್ಲಿ ವಾಹನಗಳ ಹಾಗೂ ಪಾದಚಾರಿಗಳ ಸುಗಮ ಮತ್ತು ಸುರಕ್ಷಿತ ಸಂಚಾರವನ್ನು ಖಚಿತಪಡಿಸಿಕೊಳ್ಳಲು ಈ ವಿಶೇಷ ವ್ಯವಸ್ಥೆ ಮಾಡಲಾಗಿದೆ.

****************

ಫ್ಲೈದುಬೈ ಎಫ್‌ಝಡ್ 1073 ವಿಮಾನದ ಪೈಲಟ್ ಹಾಗೂ ಭಾರತೀಯ ಪ್ರಜೆಯಾಗಿರುವ ಕ್ಯಾಪ್ಟನ್ ಸ್ಮಿತ್ ಮಚ್ಚರ್ ಅವರ ಆರೋಗ್ಯ ಸ್ಥಿತಿಯನ್ನು ನಿರಂತರವಾಗಿ ಸೂಕ್ಷ್ಮವಾಗಿ ಗಮನಿಸಲಾಗುತ್ತಿದೆ ಎಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

ಸೌದಿ ಅರೇಬಿಯಾದ ತಬುಕ್ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಪಡೆದ ನಂತರ, ಹೆಚ್ಚಿನ ವೈದ್ಯಕೀಯ ಆರೈಕೆ ಮತ್ತು ಚೇತರಿಕೆಗಾಗಿ ಅವರನ್ನು ಯುಎಇಯ ಅಬುಧಾಬಿಗೆ ಸ್ಥಳಾಂತರಿಸಲಾಗಿದೆ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ.

****************

ವಿಮಾನಯಾನ ಹಾಗೂ ನಾಗರಿಕರ ಸುರಕ್ಷತೆಗೆ ಅಪಾಯ ಉಂಟುಮಾಡುವ ಯಾವುದೇ ಕೃತ್ಯವನ್ನು ಸಹಿಸಲಾಗುವುದಿಲ್ಲ ಎಂದು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರಸ್ ಹೇಳಿದ್ದಾರೆ.

ದುಬೈನಿಂದ ಟೆಲ್ ಅವೀವ್‌ಗೆ ತೆರಳುತ್ತಿದ್ದ ಫ್ಲೈದುಬೈ ವಿಮಾನದಲ್ಲಿ ಬುಧವಾರ ನಡೆದ ದಾಳಿ ಕುರಿತು ಪ್ರತಿಕ್ರಿಯಿಸಿರುವ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿಯವರ ವಕ್ತಾರ ಸ್ಟೀಫನ್ ದುಜಾರಿಕ್, ಘಟನೆಯಲ್ಲಿ ಭಾರಿ ಅನಾಹುತ ತಪ್ಪಿದ್ದಕ್ಕೆ ಪ್ರಧಾನ ಕಾರ್ಯದರ್ಶಿ ಸಮಾಧಾನ ವ್ಯಕ್ತಪಡಿಸಿದ್ದಾರೆ. ಪ್ರಯಾಣಿಕರ ಸುರಕ್ಷತೆ ಖಚಿತಪಡಿಸಿ, ತನಿಖೆ ನಡೆಸುತ್ತಿರುವ ಎಲ್ಲ ಅಧಿಕಾರಿಗಳಿಗೆ ಅವರು ಕೃತಜ್ಞತೆ ಸಲ್ಲಿಸಿದ್ದಾರೆ. ಘಟನೆಯ ಎಲ್ಲ ಬೆಳವಣಿಗೆಗಳನ್ನು ವಿಶ್ವಸಂಸ್ಥೆ ನಿಗಾ ವಹಿಸಲಿದೆ ಎಂದು ತಿಳಿಸಿದ್ದಾರೆ.

ಇದೇ ವೇಳೆ, ದಾಳಿಕೋರನನ್ನು ಎದುರಿಸಿ ಪ್ರಯಾಣಿಕರ ಜೀವ ಉಳಿಸಲು ಧೈರ್ಯ ಪ್ರದರ್ಶಿಸಿದ ಭಾರತೀಯ ಪೈಲಟ್ ಕ್ಯಾಪ್ಟನ್ ಸ್ಮಿತ್ ಮಚ್ಚರ್ ಅವರನ್ನು ವಿಶ್ವಸಂಸ್ಥೆಯಲ್ಲಿನ ಭಾರತದ ಖಾಯಂ ನಿಯೋಗ ಶ್ಲಾಘಿಸಿದೆ.

****************

ಪ್ರಧಾನಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ 25 ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ, ದೇಶಾದ್ಯಂತ, **ಜನ ಸೇವೆಯಿಂದ ದೇಶ ಸೇವೆ** ಎಂಬ ಅಭಿಯಾನ ನಡೆಯುತ್ತಿದೆ. ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, 2047ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ.

ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ **ಕೇಂದ್ರ ಸರ್ಕಾರ ಬ್ಯಾಂಕಿಂಗ್ ಕ್ಷೇತ್ರದ ಪುನಶ್ಚೇತನಕ್ಕಾಗಿ ಕೈಗೊಂಡಿರುವ ಕ್ರಮಗಳ ಕುರಿತ** ಒಂದು ವರದಿ ಇದೀಗ ಮೂಡಿಬರಲಿದೆ.

ಭಾರತದ ಸಾಲ ಮಾರುಕಟ್ಟೆಯು ಹಿಂದೆ ನೈಜ ಆರ್ಥಿಕ ಬೆಳವಣಿಗೆಗಿಂತ 'ಫೋನ್ ಬ್ಯಾಂಕಿಂಗ್' ಸಂಸ್ಕೃತಿಯಿಂದ ಪ್ರಭಾವಿತಗೊಂಡಿತ್ತು. ಪ್ರಭಾವಿ ಕರೆಗಳ ಮೂಲಕ ಯಾವುದೇ ಪರಿಶೀಲನೆಯಿಲ್ಲದೆ ಬೃಹತ್ ಸಾಲ ನೀಡುವುದು ಹಾಗೂ ನೀಡಿದ ಸಾಲ ವಸೂಲಾಗದಿದ್ದಾಗ, ಅದನ್ನು ಮುಚ್ಚಿಹಾಕಲು ಮತ್ತೆ ಹೆಚ್ಚುವರಿ ಸಾಲ ನೀಡುವ 'ಎವರ್‌ಗ್ರೀನಿಂಗ್' ಅನೈತಿಕ ಅಭ್ಯಾಸವು ಬ್ಯಾಂಕುಗಳ ವಿಶ್ವಾಸಾರ್ಹತೆಯನ್ನು ಕುಸಿಯುವಂತೆ ಮಾಡಿತ್ತು.

ಇದಕ್ಕೆ ಅಂತ್ಯಹಾಡಲು ಕೇಂದ್ರ ಸರ್ಕಾರವು 'ಆಸ್ತಿ ಗುಣಮಟ್ಟ ಪರಾಮರ್ಶೆ' ಜಾರಿಗೆ ತಂದಾಗ, ಸಾರ್ವಜನಿಕ ವಲಯದ ಬ್ಯಾಂಕುಗಳಲ್ಲಿದ್ದ ಕೆಟ್ಟ ಸಾಲದ ಪ್ರಮಾಣ, ಶೇಕಡಾ 15ಕ್ಕೇರಿರುವುದು ಬೆಳಕಿಗೆ ಬಂದಿತು. ಇದನ್ನು ಸರಿಪಡಿಸಲು ಸರ್ಕಾರ ತ್ವರಿತ ಪತ್ತೆಹಚ್ಚುವಿಕೆ, ಪರಿಹಾರ, ಮರುಬಂಡವಾಳ ಹೂಡಿಕೆ ಹಾಗೂ ಸುಧಾರಣೆಗಳನ್ನೊಳಗೊಂಡ '4–ಆರ್' ತಂತ್ರಜ್ಞಾನ ಮತ್ತು 'ದಿವಾಳಿತನ ಕುರಿತ ಸ್ಪಷ್ಟ ನಿಬಂಧನೆಗಳನ್ನು ಹೊಂದಿರುವ ಕಾಯ್ದೆಯನ್ನು ಜಾರಿಗೆ ತಂದಿತು.

ಈ ಸಾಂಸ್ಥಿಕ ಸುಧಾರಣೆಗಳಿಂದ ಬ್ಯಾಂಕುಗಳು ಅನುತ್ಪಾದಕ ಸಾಲಗಳ ಹೊರೆಯನ್ನು ಕಳೆದುಕೊಂಡು, ದೇಶದ ಕ್ಷಿಪ್ರ ಆರ್ಥಿಕ ಪ್ರಗತಿಗೆ ಸಶಕ್ತ ಬೆಂಬಲ ನೀಡಲು ಸಜ್ಜಾಗಿವೆ.

****************

ರಕ್ಷಣಾ ಸಚಿವಾಲಯದ ಸಾರ್ವಜನಿಕ ಸಂಪರ್ಕ ವಿಭಾಗದ ಸಾರ್ವಜನಿಕ ಸಂಪರ್ಕ ಅಧಿಕಾರಿ ಹಾಗೂ ಡಿಡಿ ನ್ಯೂಸ್ ಮಿಜೋರಾಂ ನಿರ್ದೇಶಕರಾಗಿದ್ದ ನಂಪೈಬೌ ಮಾರಿನ್ಮೈ ಅವರ ಅಕಾಲಿಕ ನಿಧನಕ್ಕೆ ರಕ್ಷಣಾ ಸಚಿವಾಲಯ ತೀವ್ರ ಸಂತಾಪ ವ್ಯಕ್ತಪಡಿಸಿದೆ. ಐಜ್ವಾಲ್ ಬಳಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಮಾರಿನ್ಮೈ ಅವರೊಂದಿಗೆ ಇಂಫಾಲದ ಪಿಐಬಿ ಹೆಚ್ಚುವರಿ ಮಹಾನಿರ್ದೇಶಕ ಹಾಗೂ ಹಿರಿಯ ಐಐಎಸ್ ಅಧಿಕಾರಿ ಡಾ. ಎಂಗಾಮ್ ಪೇಮ್ ಮತ್ತು ಮತ್ತೊಬ್ಬ ಸರ್ಕಾರಿ ಅಧಿಕಾರಿ ಸಾವನ್ನಪ್ಪಿದ್ದಾರೆ.

ರಕ್ಷಣಾ ಸಚಿವಾಲಯದ ವಕ್ತಾರರಾಗಿ ಮತ್ತು ರಕ್ಷಣಾ ವರದಿಗಾರಿಕೆಯಲ್ಲಿ ನಂಪೈಬೌ ಮಾರಿನ್ಮೈ ಅವರು ಸಲ್ಲಿಸಿದ ಸುದೀರ್ಘ ಹಾಗೂ ಶ್ರೇಷ್ಠ ಸೇವೆಯನ್ನು ಸಚಿವಾಲಯವು ಗೌರವದಿಂದ ಸ್ಮರಿಸಿದೆ. ರಕ್ಷಣಾ ಪಡೆಗಳ ಚಟುವಟಿಕೆಗಳು ಮತ್ತು ಸಾಧನೆಗಳನ್ನು ಅತ್ಯಂತ ನಿಷ್ಠೆಯಿಂದ ವರದಿ ಮಾಡಿ, ಅವುಗಳನ್ನು ಸಾರ್ವಜನಿಕರಿಗೆ ತಲುಪಿಸುವಲ್ಲಿ ಅವರು ವಹಿಸಿದ ಪಾತ್ರ ಮತ್ತು ನೀಡಿರುವ ಕೊಡುಗೆ ಎಂದೆಂದಿಗೂ ಸ್ಮರಣೀಯ ಎಂದು ಸಚಿವಾಲಯ ಗೌರವ ನಮನ ಸಲ್ಲಿಸಿದೆ.

ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಕೂಡ ಮೃತ ಸಿಬ್ಬಂದಿಗಳ ಕುರಿತು ಸಂತಾಪ ಸೂಚಿಸಿದ್ದು, ಮೃತರ ಕುಟುಂಬಗಳಿಗೆ ಸಾಂತ್ವನ ಹೇಳಿದ್ದಾರೆ.

****************

ಜಪಾನ್‌ನಲ್ಲಿ ನಡೆಯುತ್ತಿರುವ 2026ರ ಏಷ್ಯನ್ ಗೇಮ್ಸ್‌ನಲ್ಲಿ ಪದಕ ಬೇಟೆ ಮುಂದುವರಿಸಿರುವ ಭಾರತ ಹಲವು ಸ್ಪರ್ಧೆಗಳಲ್ಲಿ ಪದಕ ಖಚಿತಪಡಿಸಿಕೊಂಡಿದೆ.

ಭಾರತದ ಪುರುಷರ ಹಾಕಿ ತಂಡ ಸೆಮಿಫೈನಲ್‌ನಲ್ಲಿ ಪಾಕಿಸ್ತಾನವನ್ನು 4–3 ಗೋಲುಗಳಿಂದ ಸೋಲಿಸಿ ಫೈನಲ್ ಪ್ರವೇಶಿಸಿದೆ. ಕ್ರಿಕೆಟ್ ತಂಡ ಶ್ರೀಲಂಕಾವನ್ನು 124 ರನ್‌ಗಳಿಂದ ಮಣಿಸಿ ಚಿನ್ನದ ಪದಕದ ಪಂದ್ಯಕ್ಕೆ ಅರ್ಹತೆ ಪಡೆದಿದೆ.

ಪುರುಷರ 97 ಕೆ.ಜಿ. ಗ್ರೀಕೊ–ರೋಮನ್ ಕುಸ್ತಿಯಲ್ಲಿ ನಿತೇಶ್ ಸಿವಾಚ್ ಬೆಳ್ಳಿ ಪದಕ ಗೆದ್ದಿದ್ದಾರೆ. 1962ರ ಬಳಿಕ ಏಷ್ಯನ್ ಗೇಮ್ಸ್‌ನಲ್ಲಿ ಈ ವಿಭಾಗದಲ್ಲಿ ಭಾರತಕ್ಕೆ ಲಭಿಸಿದ ಮೊದಲ ಬೆಳ್ಳಿ ಪದಕ ಇದಾಗಿದೆ.

****************